ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೦೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಬುಧವಾರ, ದಿನಾಂಕ: ೦೪ನೇ ಫೆಬ್ರವರಿ, ೨೦೧೫**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಕರಾವಳಿ ಕರ್ನಾಟಕದ ನೀರಿನ ಸದ್ಬಳಕೆಗಾಗಿ ಪಶ್ಚಿಮವಾಹಿನಿ ಯೋಜನೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೬ (೨೩೯) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಕರ್ನಾಟಕದ ನೀರಿನ ಸದ್ಬಳಕೆಗಾಗಿ ಪಶ್ಚಿಮವಾಹಿನಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ ; (ವಿವರ ನೀಡುವುದು)

(ಆ) ಇದರ ಅನುಷ್ಠಾನಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಇ) ಯೋಜನೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಹಾಸನದ ದೇವಿಕೆರೆ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭ (೨೧೬) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ನಗರದ ಇತಿಹಾಸ ಪ್ರಸಿದ್ಧ ದೇವಿಕೆರೆ ನೀರು ಕಲುಷಿತಗೊಂಡು ಆತ್ಮಹತ್ಯೆಯ ತಾಣವಾಗುತ್ತಿದ್ದು, ಈ ಕೆರೆಯನ್ನು ಸ್ವಚ್ಛಗೊಳಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ದೇವಿಕೆರೆಯಲ್ಲಿ ಸುತ್ತಮುತ್ತಲಿನ ತ್ಯಾಜ್ಯಗಳನ್ನು ಹಾಕಿ ಕಲುಷಿತಗೊಳಿಸಿರುವುದರಿಂದ ಜಲಚರ ಪ್ರಾಣಿಗಳು ಸಾಯುತ್ತಿದ್ದು, ಇದನ್ನು ರಕ್ಷಿಸಲು ಸೂಕ್ತ ರಕ್ಷಣೆ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ೯೪ಸಿ ಅರ್ಜಿದಾರರಿಗೆ ಹಕ್ಕುಪತ್ರ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮ (೪೦) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೯೪ಸಿ ಯೋಜನೆ ಅನ್ವಯ ಗ್ರಾಮಾಂತರ ಪ್ರದೇಶದಲ್ಲಿರುವ ಹಕ್ಕು ಪತ್ರಕ್ಕೆ ಬೇಡಿಕೆ ಸಲ್ಲಿಸಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲೆ ಹಾಗೂ ತಾಲ್ಲೂಕುವಾರು ವಿವರ ನೀಡುವುದು)

(ಆ) ಆ ಪೈಕಿ ಸ್ವೀಕೃತವಾದ ಮತ್ತು ತಿರಸ್ಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಇ) ಪ್ರತಿಯೊಬ್ಬ ಫಲಾನುಭವಿಯು ಹಕ್ಕು ಪತ್ರ ಪಡೆಯುವಾಗ ಸರ್ಕಾರಕ್ಕೆ ಪಾವತಿಸಬೇಕಾದ ಶುಲ್ಕ ಎಷ್ಟು ; (ವಿವರ ನೀಡುವುದು)

(ಈ) ಹಕ್ಕು ಪತ್ರ ವಿತರಿಸಲಾಗದ ಫಲಾನುಭವಿಗಳಿಗೆ ಎಂದು ಹಕ್ಕು ಪತ್ರ ನೀಡಲಾಗುವುದು ; ಇದಕ್ಕೆ ಸಂಬಂಧಪಟ್ಟ ನಿರ್ವಹಣಾಧಿಕಾರಿ ಯಾರು ? (ಪೂರ್ಣವಾದ ಮಾಹಿತಿ ನೀಡುವುದು)

## ಕೆ.ಸಿ. ವ್ಯಾಲಿ ಯೋಜನೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೯ (೨೧೦) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಗಳ ಕೆರೆಗಳಿಗೆ ನೀರುಣಿಸಲು ಕೈಗೆತ್ತಿಕೊಂಡಿರುವ ಕೆ.ಸಿ. ವ್ಯಾಲಿ ಯೋಜನೆ ಎಂದಿನಿಂದ ಪ್ರಾರಂಭವಾಗಿದೆ ;

(ಆ) ಕೆ.ಸಿ. ವ್ಯಾಲಿ ಯೋಜನೆಯ ರೂಪುರೇಷೆಗಳೇನು ;

(ಇ) ಈ ಯೋಜನೆಗೆ ಮೀಸಲಿಟ್ಟಿರುವ ಅಂದಾಜು ಮೊತ್ತವೆಷ್ಟು ;

(ಈ) ಈ ಯೋಜನೆಯು ಯಾವಾಗ ಪೂರ್ಣಗೊಳ್ಳುವುದು ?

## ರಾಜ್ಯದ ಖಾಸಗಿ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಇ.ಎಸ್.ಐ. ಸೌಲಭ್ಯ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೨೦ (೨೦೨) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಇ.ಎಸ್.ಐ. ಯೋಜನೆಯಡಿ ವೈದ್ಯಕೀಯ ಸೌಲಭ್ಯ ಪಡೆಯಲು ಯಾವ ದಿನಾಂಕದಂದು ಆದೇಶ ಹೊರಡಿಸಲಾಗಿದೆ ;

(ಆ) ರಾಜ್ಯದಲ್ಲಿನ ಎಷ್ಟು ಖಾಸಗಿ ಶಿಕ್ಷಣ ಸಂಸ್ಥೆಗಳು ಇ.ಎಸ್.ಐ. ವೈದ್ಯಕೀಯ ಸೌಲಭ್ಯ ಪಡೆಯಲು ಇಲಾಖೆಯೊಂದಿಗೆ ನೋಂದಾವಣೆ ಮಾಡಿಕೊಂಡಿವೆ ;

(ಇ) ನೋಂದಾವಣೆ ಮಾಡದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ನೋಂದಣಿ ಮಾಡಿಸಲು ಇಲಾಖೆ ಕೈಗೊಂಡ ಕ್ರಮಗಳೇನು ?

## ಕುಮ್ಕಿಯಿಂದ ರೈತರಿಗೆ ಸಿಗುವ ವಿಶೇಷ ಸೌಲಭ್ಯಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧ (೪೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದಿನ ಮದ್ರಾಸ್ ಮತ್ತು ಇಂದಿನ ಕರ್ನಾಟಕ ಸರ್ಕಾರದನ್ವಯ ಕುಮ್ಕಿ ಎಂದರೇನು ; ಕುಮ್ಕಿಯಿಂದ ರೈತರಿಗೆ ಸಿಗುವ ವಿಶೇಷ ಸೌಲಭ್ಯಗಳು ಯಾವುವು ;

(ಆ) ಕುಮ್ಕಿ ಭೂಮಿಯ ಮಾರಾಟಕ್ಕೆ ಅವಕಾಶವಿಲ್ಲದಂತೆ, ಪರಿವರ್ತನೆಗೆ ಅವಕಾಶವಿಲ್ಲದಂತೆ ಕೃಷಿಗೆ ಪೂರಕವಾಗಿ ಉಪಯೋಗಿಸುವಂತೆ ಹಿಂದಿನ ಸರ್ಕಾರಗಳು ಕೊಟ್ಟ ಸವಲತ್ತುಗಳನ್ನು ಶಾಸನಬದ್ಧಗೊಳಿಸಲಾಗುವುದೇ ?

## ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಸಣ್ಣ ಕೆರೆಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨ (೨೩೫) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಸಣ್ಣ ಕೆರೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಕೆರೆಗಳ ಹೂಳನ್ನು ಎತ್ತುವ ಸಲುವಾಗಿ ಕಳೆದ ೩ ವರ್ಷಗಳಿಂದ ಬಿಡುಗಡೆಯಾಗಿರುವ ಹಣವೆಷ್ಟು ;

(ಇ) ಖರ್ಚಾದ ಹಣವೆಷ್ಟು ಹಾಗೂ ಬಾಕಿ ಇರುವ ಹಣವೆಷ್ಟು ? (ವಿವರ ನೀಡುವುದು)

## ಕನ್ನಡ ಚಲನಚಿತ್ರ ರಂಗದಲ್ಲಿರುವ ಕಾರ್ಮಿಕರು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೩ (೧೪೪) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಚಲನಚಿತ್ರ ರಂಗದಲ್ಲಿರುವ ಕಾರ್ಮಿಕರು, ಕಲಾವಿದರು, ತಂತ್ರಜ್ಞರುಗಳನ್ನು ಅಸಂಘಟಿತ ಕಾರ್ಮಿಕರು ಅಥವಾ ಯಾವ ಬಗೆಯ ಕಾರ್ಮಿಕರೆಂದು ಸರ್ಕಾರ ಘೋಷಣೆ ಮಾಡಿದೆ ;

(ಆ) ಕಾರ್ಮಿಕ ಕಲ್ಯಾಣ ಮಂಡಳಿಗಳ ಸವಲತ್ತುಗಳನ್ನು ಪಡೆಯಲು, ಚಲನಚಿತ್ರರಂಗದ ವಲಯದಿಂದ ಎಷ್ಟು ಕಾರ್ಮಿಕರುಗಳನ್ನು ಈವರೆಗೆ

ನೋಂದಣಿ ಮಾಡಲಾಗಿದೆ ; ನೋಂದಣಿಯಾಗದ ಕಾರ್ಮಿಕರು ಈ ವಲಯದಲ್ಲಿ ಎಷ್ಟು ಇದ್ದಾರೆಂದು ಅಂದಾಜಿಸಲಾಗಿದೆ ; (ವಿವರಗಳನ್ನೊದಗಿಸುವುದು)

(ಇ) ಅಸಂಘಟಿತ ಕಾರ್ಮಿಕರನ್ನು ಇಲಾಖೆಯ ಸಿಬ್ಬಂದಿಗಳೇ ಪತ್ತೆ ಹಚ್ಚಿ ನೋಂದಣಿ ಮಾಡುವ ವ್ಯವಸ್ಥೆಯಿದೆಯೇ ; ಅಥವಾ ಅಸಂಘಟಿತ ಕಾರ್ಮಿಕರೇ ಸ್ವಯಂ ಇಚ್ಛೆಯಿಂದ ಹಾಜರಾಗಿ ನೋಂದಣಿ ಮಾಡಿಸಿಕೊಳ್ಳುವ ವ್ಯವಸ್ಥೆಯಿದೆಯೇ ;

(ಈ) ಕರ್ನಾಟಕ ರಾಜ್ಯ ಕಾರ್ಮಿಕ ಕಲ್ಯಾಣ ಮಂಡಳಿ ಅಥವಾ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗಳ ಕಾರ್ಯಕ್ರಮಗಳೇನು ; ಈ ಎರಡೂ ಕಲ್ಯಾಣ ಮಂಡಳಿಗಳಲ್ಲಿ ಹಾಲಿ ಶೇಖರಣೆಯಾಗಿರುವ ಹಣ ಎಷ್ಟು ;

(ಉ) ಈ ಕಾರ್ಯಕ್ರಮ ಮತ್ತು ಸವಲತ್ತುಗಳನ್ನು ಕನ್ನಡ ಚಲನಚಿತ್ರ ರಂಗದ ಎಷ್ಟು ಕಾರ್ಮಿಕರು ಪಡೆದಿದ್ದಾರೆ ; ಪಡೆಯುವ ವಿಧಾನಗಳಾವುವು ?

## ನಮೂನೆ–೫೩ರ ಅಡಿಯಲ್ಲಿ ಭೂಮಿ ಮಂಜೂರು ಮಾಡುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪ (೫೦) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೂಡಿಗೆರೆ ತಾಲ್ಲೂಕು ಕಂದಾಯ ಇಲಾಖೆಗೆ ನಮೂನೆ–೫೩ರ ಅಡಿಯಲ್ಲಿ ಭೂಮಿ ಮಂಜೂರಾತಿಗಾಗಿ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಎಷ್ಟು ಫಲಾನುಭವಿಗಳಿಗೆ ನಮೂನೆ–೫೩ರಲ್ಲಿ ೨೦೦೫ ರಿಂದ ೨೦೧೩ರವರೆಗೆ ಸಾಗುವಳಿ ಪತ್ರ ನೀಡಲಾಗಿದೆ ; ಈ ಅವಧಿಯಲ್ಲಿ ಮಂಜೂರಾತಿಯಲ್ಲಿ ಬಹಳಷ್ಟು ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನಮೂನೆ–೫೩ರಲ್ಲಿನ ಅಡಿಯಲ್ಲಿ ಮಂಜೂರು ಮಾಡಲು ಬಾಕಿ ಉಳಿದಿರುವ ಪ್ರಕರಣಗಳೆಷ್ಟು ;

(ಇ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳು ಎಷ್ಟು ಜನರು ಅರ್ಜಿ ಸಲ್ಲಿಸಿರುತ್ತಾರೆ ; ಎಷ್ಟು ಜನ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ನಮೂನೆ–೫೩ರಲ್ಲಿ ಭೂಮಿ ಹಂಚಿಕೆ ಮಾಡಿ ಸಾಗುವಳಿ ಪತ್ರ ನೀಡಲಾಗಿದೆ ?

## ಅರಣ್ಯ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಂಗಾಮಿ ನೌಕರರಿಗೆ ಸೇವಾ ಭದ್ರತೆ ಒದಗಿಸುವ ಬಗ್ಗೆ

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫ (೨೧೪) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಇಲಾಖೆಯಲ್ಲಿ ಹಂಗಾಮಿ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ;

(ಆ) ಸದರಿ ನೌಕರರನ್ನು ಖಾಯಂಗೊಳಿಸಲು ಇಲಾಖೆ ಯೋಜಿಸುತ್ತಿದೆಯೇ ; ಹಾಗಿದ್ದಲ್ಲಿ, ಈ ವಿಷಯಕ್ಕೆ ಸಂಬಂಧಿದಂತೆ ಇಲಾಖೆ ಕೈಗೊಳ್ಳಲಿರುವ ಕ್ರಮಗಳೇನು :

(ಇ) ಹಂಗಾಮಿ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವ ಬಹಳಷ್ಟು ನೌಕರರು ನಿವೃತ್ತಿ ಅಂಚಿನಲ್ಲಿದ್ದು, ಸದರಿ ನೌಕರರಿಗೆ ಇಲಾಖೆ ಒದಗಿಸಬೇಕಾದ ಸೇವಾ ಭದ್ರತೆ ಹಾಗೂ ನಿವೃತ್ತಿ ನಂತರ ನೌಕರರ ಕುಟುಂಬಗಳ ಹಿತದೃಷ್ಟಿಯಿಂದ ಇಲಾಖೆ ತೆಗೆದುಕೊಳ್ಳಲಿರುವ ಕ್ರಮಗಳೇನು ; ಈಗಾಗಲೇ ಹಲವು ನೌಕರರು ನಿವೃತ್ತಿ ಅಂಚಿನಲ್ಲಿದ್ದು, ನಿವೃತ್ತಿ ನಂತರ ಅಂತಹ ನೌಕರರ ಸೇವೆಯನ್ನು ಯಾವ ರೀತಿಯಲ್ಲಿ ಪರಿಗಣಿಸಲಾಗುವುದು ? (ಮಾಹಿತಿ ಒದಗಿಸುವುದು)

## ಮಡಿಕೇರಿ ಜಿಲ್ಲಾಧಿಕಾರಿ ಕಛೇರಿ ಸಮುಚ್ಛಯಕ್ಕೆ ಸಂಪರ್ಕ ದಾರಿ ಕಲ್ಪಿಸುವ ಬಗ್ಗೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬ (೧೯೦) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ನೂತನ ಜಿಲ್ಲಾಧಿಕಾರಿಗಳ ಕಛೇರಿಯ ಸಮುಚ್ಛಯಕ್ಕೆ ಸಂಪರ್ಕ ದಾರಿ ಕಲ್ಪಿಸಲು ಪ್ರತ್ಯೇಕ ಮೇಲು ಸೇತುವೆಯ ನಿರ್ಮಾಣ ಮಾಡುವ ಯೋಜನೆಯು ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಇಲ್ಲವಾದಲ್ಲಿ, ಕಾರಣಗಳನ್ನು ತಿಳಿಸುವುದು ;

(ಆ) ಸದರಿ ಸಮುಚ್ಛಯಕ್ಕೆ ತಡೆಗೋಡೆ ನಿರ್ಮಿಸುವ ಕಾರ್ಯ ಈಗ ಯಾವ ಹಂತದಲ್ಲಿದೆ ; ತಡೆಗೋಡೆಯನ್ನು ಪೂರ್ಣಗೊಳಿಸುವುದು ಯಾವಾಗ ? (ನಿಖರ ಮಾಹಿತಿಯನ್ನು ನೀಡುವುದು)

## ಆವತಿ ಬೆಟ್ಟದಲ್ಲಿರುವ ಸರ್ಕಾರಿ ಜಾಗವನ್ನು ಖಾಸಗಿ ಸಂಸ್ಥೆಗೆ ನೀಡುವ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭ (೧೩೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸ್ಥಳೀಯರ ವಿರೋಧದ ನಡುವೆಯೂ ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡ ಜನಿಸಿದ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ, ದೇವನಹಳ್ಳಿ ತಾಲ್ಲೂಕಿನಲ್ಲಿರುವ ಆವತಿ ಗ್ರಾಮದ, ಆವತಿ ಬೆಟ್ಟದಲ್ಲಿ ಶಾಲಾ–ಕಾಲೇಜು ನಡೆಸಲು ಸರ್ಕಾರಿ ಜಾಗವನ್ನು ಖಾಸಗಿ ಸಂಸ್ಥೆಗೆ ನೀಡಲು ಸರ್ಕಾರ ಮುಂದಾಗಿರುವ ವಿಷಯ ನಿಜವೇ ;

(ಆ) ಅದರಂತೆ, ಯಾವ ಶಿಕ್ಷಣ ಸಂಸ್ಥೆಗೆ ಎಷ್ಟು ವರ್ಷಗಳಿಗೆ, ಎಷ್ಟು ಜಾಗವನ್ನು ನೀಡಲು ಸರ್ಕಾರ ಮುಂದಾಗಿದೆ ?

## ಕೈಗಾರಿಕಾ ತರಬೇತಿ ಸಂಸ್ಥೆಗಳ ಸ್ಥಾಪನೆ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮ (೧೪೫) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಇತ್ತೀಚೆಗೆ ಹೊಸದಾಗಿ ೧೦೦ ಕೈಗಾರಿಕಾ ತರಬೇತಿ ಸಂಸ್ಥೆಗಳ ಸ್ಥಾಪನೆಗೆ ಅನುಮತಿ ನೀಡಿರುವುದು ನಿಜವೇ ; ಹಾಗಿದ್ದಲ್ಲಿ, ವಿವರ ನೀಡುವುದು :

(ಆ) ನಿರ್ದೇಶಕರ ಹುದ್ದೆ ಖಾಲಿ ಇದ್ದು, ಉಪನ್ಯಾಸಕರ ಕೊರತೆ ಇದ್ದರೂ, ಹೊಸದಾಗಿ ೧೦೦ I.T.I. ಸಂಸ್ಥೆಗಳನ್ನು ತೆರೆದಿರುವ ಔಚಿತ್ಯವೇನು ?

(ಇ) ಈ ಇಲಾಖೆಯಲ್ಲಿ ಎರಡು ಸಾವಿರಕ್ಕೂ ಹೆಚ್ಚು ಹುದ್ದೆ ಖಾಲಿ ಇರುವುದು ನಿಜವೇ ; ಹಾಗಿದ್ದಲ್ಲಿ, ಇದನ್ನು ಯಾವಾಗ ತುಂಬಲಾಗುವುದು ? (ವಿವರ ನೀಡುವುದು)

## ಭದ್ರಾ ನಾಲಾ ಕಾಮಗಾರಿಯಲ್ಲಿ ನಡೆದಿರುವ ಅವ್ಯವಹಾರ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯ (೨೨೧) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭದ್ರಾ ನಾಲಾ ಕಾಮಗಾರಿಯಲ್ಲಿ ಹಲವಾರು ಗುರುತರ ಅವ್ಯವಹಾರಗಳು ನಡೆದಿರುವುದು ನಿಜವೇ ;

(ಆ) ಆಗಿದ್ದರೆ, ಅವ್ಯವಹಾರ ಪ್ರಕರಣಗಳ ಸಂಖ್ಯೆ ಎಷ್ಟು ; ದುರುಪಯೋಗವಾಗಿರುವ ಹಣದ ಮೊತ್ತ ಎಷ್ಟು ; (ಪ್ರಕರಣವಾರು ವಿವರ ನೀಡುವುದು)

(ಇ) ಈ ಪ್ರಕರಣಗಳ ತನಿಖೆ ಯಾವ ಹಂತದಲ್ಲಿದೆ ; ತಪ್ಪಿತಸ್ಥರ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಭೂ–ಮಾಪನ ಇಲಾಖೆಯಲ್ಲಿ ಸರ್ವೇಯರ್‌ಗಳ ಕೊರತೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦ (೧೯೪) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭೂ–ಮಾಪನ ಇಲಾಖೆಯಲ್ಲಿ ಸರ್ವೇಯರ್‌ಗಳು ಇಲ್ಲದೆ ಇರುವುದರಿಂದ ಜಮೀನುಗಳ ಪೋಡಿ ಮಾಡುವುದು ಹಾಗೂ ಹದ್ದುಬಸ್ತು ಗುರ್ತಿಸುವುದಕ್ಕೆ ಅರ್ಜಿ ಸಲ್ಲಿಸಿದ ರೈತರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪೋಡಿ ಹಾಗೂ ಹದ್ದುಬಸ್ತು ಗುರ್ತಿಸಲು ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಅರ್ಜಿದಾರರ ಹೆಸರು, ಅರ್ಜಿ ಸಲ್ಲಿಸಿದ ದಿನಾಂಕ ಮತ್ತು ಕೈಗೊಂಡ ಕ್ರಮದ ಬಗ್ಗೆ ವಿವರಣೆ ನೀಡುವುದು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈಗಾಗಲೇ ಎಷ್ಟು ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ; ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಯಾವ ಕಾಲಮಿತಿಯಲ್ಲಿ ಪ್ರಕರಣಗಳನ್ನು ವಿಲೇವಾರಿ ಮಾಡಲಾಗುವುದು ;

(ಈ) ಪೋಡಿ ಮತ್ತು ಹದ್ದುಬಸ್ತು ಗುರ್ತಿಸುವ ಪ್ರಕರಣಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 1008, ಪ್ರತಿಗಳು– 1025 – ಪಿ8